# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 232 (203) |
| ಸದಸ್ಯರು ಹೆಸರು | : ಶ್ರೀ ಬಿ.ಜಿ.ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 14.12.2021 |
| ಉತ್ತರಿಸುವ ಸಚಿವರು | : ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ ಸಂ: | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು;(ವಿವರ ನೀಡುವುದು) | ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿ 1 ನಗರಸಭೆ, 7 ಪುರಸಭೆ ಮತ್ತು 3 ಪಟ್ಟಣ ಪಂಚಾಯತಿ ಹಾಗೂ<br><br>ಯಾದಗಿರಿ ಜಿಲ್ಲಾ ವ್ಯಾಪ್ತಿಯಲ್ಲಿ 3 ನಗರಸಭೆ, 3 ಪುರಸಭೆ ಮತ್ತು 1 ಪಟ್ಟಣ ಪಂಚಾಯತಿಗಳಿದ್ದು, ವಿವರ ಕೆಳಕಂಡಂತಿದೆ. |

| ಜಿಲ್ಲೆ | ನಗರಸಭೆ | ಪುರಸಭೆ | ಪಟ್ಟಣ ಪಂಚಾಯತಿ |
|---|---|---|---|
| ಕಲಬುರಗಿ | ಶಹಾಬಾದ | ಆಳಂದ | ಕಾಳಗಿ |
| | | ಚಿತ್ತಾಪುರ | ಕಮಲಾಪುರ |
| | | ಸೇಡಂ | ಯಡ್ರಾಮಿ |
| | | ವಾಡಿ | |
| | | ಅಫಜಲಪುರ | |
| | | ಚಿಂಚೋಳಿ | |
| | | ಜೇವರ್ಗಿ | |
| | | | |
| ಯಾದಗಿರಿ | ಯಾದಗಿರಿ | ಗುರುಮಿಟ್ಕಲ್ | ಹುಣಸಗಿ |
| | ಶಹಾಪುರ | ಕಕ್ಕೇರಾ | |
| | ಸುರಪುರ | ಕೆಂಭಾವಿ | |

| ಕ್ರ ಸಂ: | ಪ್ರಶ್ನೆ | ಉತ್ತರ |
|---|---|---|
| ಆ) | ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಿಗೆ ಮಂಜೂರಾದ ವಿವಿಧ ಹುದ್ದೆಗಳ ಸಂಖ್ಯೆ ಎಷ್ಟು ಇವುಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;(ವಿವರ ನೀಡುವುದು) | ರಾಜ್ಯದಲ್ಲಿನ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಿಗೆ ಮಂಜೂರಾದ, ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಹುದ್ದೆಗಳ ಸಂಖ್ಯೆ ಕೆಳಕಂಡಂತಿದೆ. |

| ಮಂಜೂರಾದ ಹುದ್ದೆಗಳ ಸಂಖ್ಯೆ | ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ ನೌಕರರ ಸಂಖ್ಯೆ | ಖಾಲಿ ಹುದ್ದೆಗಳ ಸಂಖ್ಯೆ |
|---|---|---|
| 35627 | 23046 | 12581 |

ಆದಾಗ್ಯೂ, ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿನ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಿಗೆ ಮಂಜೂರಾದ, ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಹುದ್ದೆಗಳ ಸಂಖ್ಯೆ ಕೆಳಕಂಡಂತಿದೆ.

| ಜಿಲ್ಲೆ | ಮಂಜೂರಾದ ಹುದ್ದೆಗಳ ಸಂಖ್ಯೆ | ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ ನೌಕರರ ಸಂಖ್ಯೆ | ಖಾಲಿ ಹುದ್ದೆಗಳ ಸಂಖ್ಯೆ |
|---|---|---|---|
| ಕಲಬುರಗಿ | 1174 | 549 | 625 |
| ಯಾದಗಿರಿ | 1039 | 391 | 648 |

..2

| | | |
|---|---|---|
| ಇ) | ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳ ವ್ಯಾಪ್ತಿಯಲ್ಲಿರುವ ಮನೆ ಮತ್ತು ಇತರೆ ಸ್ಥಳಕ್ಕೆ ಎಷ್ಟು ವರ್ಷಕ್ಕೊಮ್ಮೆ ಹಾಗೂ ಯಾವ ಪ್ರಮಾಣದಲ್ಲಿ ಟ್ಯಾಕ್ಸ್ ಪರಿಷ್ಕರಣೆ ಮಾಡಲಾಗುವುದು? (ಸಂಪೂರ್ಣ ವಿವರ ನೀಡುವುದು) | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ 2002-03ನೇ ಸಾಲಿನಿಂದ ಸ್ವಯಂ ಘೋಷಿತ ಆಸ್ತಿ ತೆರಿಗೆ ಪದ್ಧತಿಯನ್ನು ಜಾರಿಗೊಳಿಸಲಾಗಿದ್ದು, 2005-06ನೇ ಸಾಲಿನ ಮಾರುಕಟ್ಟೆ ಮಾರ್ಗಸೂಚಿ ಬೆಲೆಗಳ ಆಧಾರದ ಮೇಲೆ ಆಸ್ತಿ-ತೆರಿಗೆಯನ್ನು ನಿರ್ಧರಣೆ ಮಾಡಲಾಗುತ್ತಿತ್ತು ಹಾಗೂ ಪ್ರತಿ ಮೂರು ವರ್ಷಗಳಿಗೊಮ್ಮೆ ಆಸ್ತಿ ತೆರಿಗೆಯನ್ನು ಪರಿಷ್ಕರಣೆ ಮಾಡಲಾಗುತ್ತಿತ್ತು.<br><br>ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ಮತ್ತು ಕರ್ನಾಟಕ ಪೌರನಿಗಮಗಳ ಅಧಿನಿಯಮ 1976ಕ್ಕೆ ತಿದ್ದುಪಡಿ ತರಲಾಗಿದ್ದು, 2021-22ನೇ ಸಾಲಿನಿಂದ ಚಾಲ್ತಿ ಸಾಲಿನ ಮಾರುಕಟ್ಟೆ ಮಾರ್ಗಸೂಚಿ ಬೆಲೆಗಳ ಆಧಾರದ ಮೇಲೆ ತೆರಿಗೆ ನಿರ್ಧರಿಸಲಾಗುವುದು. ಪ್ರತಿ ವರ್ಷ ಮಾರ್ಗಸೂಚಿ ಬೆಲೆಗಳ ಪರಿಷ್ಕರಣೆಯಾದಂತೆ ಆಸ್ತಿ ತೆರಿಗೆ ಪರಿಷ್ಕರಣೆಯಾಗುತ್ತದೆ ಹಾಗೂ ಮಾರ್ಗಸೂಚಿ ಬೆಲೆಗಳು ಪರಿಷ್ಕರಣೆಯಾಗದ ವರ್ಷದಲ್ಲಿ ಶೇ.3 ರಿಂದ ಶೇ.5 ರವರೆಗೆ ತೆರಿಗೆ ಹೆಚ್ಚಳ ಮಾಡಬೇಕಾಗಿರುತ್ತದೆ. |

ಸಂಖ್ಯೆ: ನಅಇ 22 ಎಲ್‌ಎಕ್ಯೂ 2021

(ಎನ್.ನಾಗರಾಜು ಎಂ ಟಿ ಬಿ)
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು